**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೇಶವ ಪ್ರಸಾದ್ .ಎಸ್ ರವರು ಕೃಷಿ ಡಿಪ್ಲೋಮಾ ಕೋರ್ಸ್ ಪ್ರಾರಂಭಿಸುವ ವಿಷಯಕ್ಕೆ ಸಂಬಂಧಿಸಿದಂತೆ ಪ್ರಸ್ತಾಪಿಸಿರುವ ಶೂನ್ಯ ವೇಳೆ ಪ್ರಶ್ನೆಗೆ ಮಾನ್ಯ ಕೃಷಿ ಸಚಿವರ ಉತ್ತರ.**

**ವಿಷಯ:** ವಿಜಯಕರ್ನಾಟಕ ಪತ್ರಿಕೆಯಲ್ಲಿ ಕೃಷಿ ವಿಶ್ವವಿದ್ಯಾಲಯಗಳ ಕೃಷಿ ಡಿಪ್ಲೋಮಾ ಕೋರ್ಸ್‌ಗಳನ್ನು ಪ್ರಸಕ್ತ ಶೈಕ್ಷಣಿಕ ವರ್ಷದಿಂದ ರಾಜ್ಯ ಸರ್ಕಾರ ರದ್ದುಗೊಳಿಸಿರುವ ಬಗ್ಗೆ ವರದಿಯಾಗಿದೆ. ಸರ್ಕಾರದ ಈ ಕ್ರಮದಿಂದ ಗ್ರಾಮೀಣ ಭಾಗದ ಬಡ ವಿದ್ಯಾರ್ಥಿಗಳಿಗೆ ತೊಂದರೆ ಉಂಟಾಗಿದೆ. ಭಾರತ ಕೃಷಿ ಪ್ರಧಾನ ರಾಷ್ಟ್ರವಾಗಿದ್ದು, ಕೃಷಿಗೆ ಮತ್ತು ಕೃಷಿ ಸಂಬಂಧಿಸಿದ ಅಧ್ಯಯನಗಳಿಗೂ ಹೆಚ್ಚಿನ ಆದ್ಯತೆ ನೀಡುವುದು ಸರ್ಕಾರದ ಕರ್ತವ್ಯ ಮತ್ತು ಜವಾಬ್ದಾರಿಯಾಗಿದೆ. ಆದರೆ, ಸರ್ಕಾರ ಈಗ ಕೃಷಿ ಸಂಬಂಧಿಸಿದ ಡಿಪ್ಲೋಮಾ ಕೋರ್ಸ್ ಸ್ಥಗಿತಗೊಳಿಸಿರುವುದು ದುರದೃಷ್ಟಕರ. ಕೃಷಿಗೆ ಸಂಬಂಧಿಸಿದಂತೆ ಪದವಿ ಮತ್ತು ಸ್ನಾತಕೋತ್ತರ ಕೋರ್ಸ್‌ಗಳಿದ್ದರು ಇವುಗಳು ಗ್ರಾಮೀಣ ಭಾಗದ ಬಡ ವಿದ್ಯಾರ್ಥಿಗಳಿಗೆ ಕೈಗೆಟಗುವುದು ಕಷ್ಟವಾಗುತ್ತಿದ್ದರಿಂದ ಕಡಿಮೆ ಅವಧಿಯ ಹಾಗೂ ಕಡಿಮೆ ಶುಲ್ಕದ ಕೃಷಿ ಡಿಪ್ಲೋಮಾ ಕೋರ್ಸ್‌ಗಳಿಗೆ ಹೆಚ್ಚಿನ ಬಡ ವಿದ್ಯಾರ್ಥಿಗಳು ಸೇರುತ್ತಿದ್ದರು. ಕನ್ನಡ ಮಾಧ್ಯಮದ ಅವಕಾಶವಿದ್ದರಿಂದ ಗ್ರಾಮೀಣ ಭಾಗದವರು ಹೆಚ್ಚಿನ ಸಂಖ್ಯೆಯಲ್ಲಿ ಪ್ರಯೋಜನ ಪಡೆಯುತ್ತಿದ್ದರು. ಈ ಕೋರ್ಸ್ ಅಧ್ಯಯನದಿಂದ ಸರಕಾರಿ ಮತ್ತು ಖಾಸಗಿ ಸಂಸ್ಥೆಯಲ್ಲಿ ಉದ್ಯೋಗವಕಾಶದ ಜೊತೆಗೆ ಕೃಷಿ ಯಂತ್ರೋಪಕರಣಗಳ ಬಳಕೆ, ತಂತ್ರಜ್ಞಾನದ ಬಗ್ಗೆಯೂ ತರಬೇತಿ ದೊರೆಯುತ್ತಿತ್ತು.

ಅಲ್ಲದೆ ಧಾರವಾಡ ಮತ್ತು ಬೆಂಗಳೂರು ಕೃಷಿ ವಿಶ್ವವಿದ್ಯಾಲಯಗಳು ಡಿಪ್ಲೊಮಾ ಕೋರ್ಸ್‌ಗೆ ಅಧಿಸೂಚನೆ ಹೊರಡಿಸಿ ನಂತರ ಏಕಾಏಕಿ ಅಧಿಸೂಚನೆ ಹಿಂಪಡೆದಿರುವ ಬಗ್ಗೆಯೂ ಸಹ ವರದಿಯಾಗಿದೆ. ಇದರಿಂದ ಹಲವಾರು ವಿದ್ಯಾರ್ಥಿಗಳಿಗೆ ಸಮಸ್ಯೆಯಾಗಿದೆ. ಆದ್ದರಿಂದ ಸರ್ಕಾರ ಕೃಷಿಕ್ಷೇತ್ರದ ಉತ್ತೇಜನಕ್ಕೆ ಹಾಗೂ ಗ್ರಾಮೀಣ ಭಾಗದ ವಿದ್ಯಾರ್ಥಿಗಳ ಹಿತ ಕಾಪಾಡಲು ಕೂಡಲೇ ಕೃಷಿ ಡಿಪ್ಲೊಮಾ ಕೋರ್ಸ್ ಪುನರಾಂಭಿಸಬೇಕು, ಈ ಕೋರ್ಸ್‌ಗೆ ಅನುದಾನವನ್ನು ನೀಡಬೇಕು, ಈ ಕೋರ್ಸ್ ಮಾಡುವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ನೀಡಿ ಪ್ರೋತ್ಸಾಹಿಸಬೇಕೆಂದು ಉನ್ನತ ಶಿಕ್ಷಣ ಸಚಿವರನ್ನು ಶೂನ್ಯವೇಳೆಯಲ್ಲಿ ಆಗ್ರಹಿಸಲು ಬಯಸುತ್ತೇನೆ.

***

**ಉತ್ತರ:** ಕರ್ನಾಟಕ ಸರ್ಕಾರವು 2 ವರ್ಷದ ಕೃಷಿ ಹಾಗೂ ಕೃಷಿ ಸಂಬಂಧಿತ ಡಿಪ್ಲೋಮಾ ಕೋರ್ಸ್‌ನ್ನು ಗ್ರಾಮೀಣ ಪರಿಸರದಲ್ಲಿ ಕೃಷಿಕರೊಡನೆ ಕೆಲಸ ಮಾಡುವ ತಾಂತ್ರಿಕ ವರ್ಗವನ್ನು ಪೂರೈಸುವ ಉದ್ದೇಶದಿಂದ ರಾಜ್ಯದ ಎಲ್ಲಾ ಕೃಷಿ ವಿಶ್ವವಿದ್ಯಾಲಯಗಳಲ್ಲಿ ಕೃಷಿ ಡಿಪ್ಲೋಮಾ ಕೋರ್ಸ್‌ನ್ನು

ಪ್ರಾರಂಭಿಸಲಾಯಿತು. ಪ್ರಾರಂಭದ 5 ವರ್ಷಗಳಲ್ಲಿ ಅರ್ಹ ವಿದ್ಯಾರ್ಥಿಗಳಿಂದ ಬೇಡಿಕೆ ಇದ್ದು ಕ್ರಮೇಣ ನಂತರದ ದಿನಗಳಲ್ಲಿ ಬೇಡಿಕೆ ಕಡಿಮೆಯಾಗುತ್ತಾ ಬಂದಿರುತ್ತದೆ.

ಮೇಲಿನ ವಿಷಯವನ್ನು ಈ ಕೆಳಕಂಡ ಸಮಿತಿಗಳಲ್ಲಿ ಮಂಡಿಸಲಾಗಿ, ಈ ಕೆಳಕಂಡಂತೆ ನಿರ್ಣಯ ತೆಗೆದುಕೊಂಡಿರುತ್ತದೆ;

(ಅ) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ : 18.06.2022ರಂದು 6ನೇ ಪರಿಣಿತರ ಸಮಿತಿಯ ಸಭೆಯ ನಡವಳಿ:-

"…. *The Committee decided to discontinue the Agricultural Diploma Courses offered by the Universities since these courses are not more* useful and also not supported by the State Government. Further, the Committee advised to upgrade the degree programme depending on the demand and facilities available in respective University".

(ಆ) ಮಾನ್ಯ ಕೃಷಿ ಸಚಿವರ ಅಧ್ಯಕ್ಷತೆಯಲ್ಲಿ ನಡೆದ 32ನೇ ಸಮನ್ವಯ ಸಮಿತಿ ಸಭೆಯ ನಡವಳಿ :-

"….Item-02: Direction for Closure of Diploma in Agriculture Programmes. After detailed deliberations, the Co-ordination Committee suggested to take decision as per the NEP guidelines. The Co-ordination Committee also suggested to reduce the number of Diploma Colleges due to lack of teaching, Non-teaching staff, infrastructure and paucity of funds.

ರಾಜ್ಯ ಸರ್ಕಾರದಲ್ಲಿ ಇಲ್ಲಿಯವರೆಗೆ ಡಿಪ್ಲೋಮಾ ಕೃಷಿ ಕೋರ್ಸ್‌ನ್ನು ಪೂರ್ಣಗೊಳಿಸಿದವರಿಗೆ ಸರ್ಕಾರಿ ಹುದ್ದೆಯನ್ನು ನೀಡಲು ವೃಂದ ಮತ್ತು ನೇಮಕಾತಿ ನಿಯಮಗಳು ಇರದೇ ಇರುವುದರಿಂದ ಸರ್ಕಾರಿ ನೇಮಕಾತಿಗಳು ಆಗುತ್ತಿರುವುದಿಲ್ಲ. ರಾಷ್ಟ್ರೀಯ ಶಿಕ್ಷಣ ನೀತಿ ಅನ್ವಯ 2 ವರ್ಷ ಕೃಷಿ ಪದವಿಯನ್ನು ಓದಿದ ವಿದ್ಯಾರ್ಥಿಗಳಿಗೆ ಕೃಷಿ ಡಿಪ್ಲೋಮಾ ಪದವಿ ನೀಡಲು ಅವಕಾಶವಿರುತ್ತದೆ. ಇತ್ತೀಚಿನ ದಿನಗಳಲ್ಲಿ ವಿದ್ಯಾರ್ಥಿಗಳು ಸಲ್ಲಿಸುವ ಅರ್ಜಿಗಳ ಸಂಖ್ಯೆಯಲ್ಲಿ ಗಣನೀಯವಾಗಿ ಬೇಡಿಕೆ ಕಡಿಮೆಯಾಗಿರುತ್ತದೆ ಹಾಗೂ ಎಲ್ಲಾ ಕೃಷಿ ವಿಶ್ವವಿದ್ಯಾಲಯಗಳಲ್ಲಿ ಪ್ರಸ್ತುತವಾಗಿ ನಡೆಯುತ್ತಿರುವ ಡಿಪ್ಲೋಮಾ ಕೇಂದ್ರಗಳನ್ನು ಬೇಡಿಕೆಗೆ ಅನುಗುಣವಾಗಿ ಸ್ನಾತಕ ಪದವಿ ಕಾರ್ಯಕ್ರಮ ಎಂದು ಮೇಲ್ದರ್ಜೆಗೆ ಏರಿಸಲು ಸೂಚಿಸಿ ಕೃಷಿ ಡಿಪ್ಲೋಮಾ ಕಾರ್ಯಕ್ರಮವನ್ನು ಸ್ಥಗಿತಗೊಳಿಸಲು ನಿರ್ಣಯಿಸಿ ರಾಜ್ಯದಲ್ಲಿ ಕೃಷಿ ಡಿಪ್ಲೋಮಾ ಕೋರ್ಸ್‌ಗೆ ಈ ಸಾಲಿನಿಂದ ಪ್ರವೇಶವನ್ನು ಸ್ಥಗಿತಗೊಳಿಸಲಾಗಿದೆ.

ಇ-ಸಂಖ್ಯೆ: AGRI/19/AUB/2023

(ಎನ್. ಚಲುವರಾಯಸ್ವಾಮಿ)
ಕೃಷಿ ಸಚಿವರು